ಸಿವಿಲ್ ನ್ಯಾಯಾಧೀಶರು ಮತ್ತು ಹೆ. ಪ್ರದನ್ಯಾದಂ.ರವರ ನ್ಯಾಯಾಲಯ, ತರೀಕೆರೆ.

<u>ಸಿ.ಸಿ.ನಂ.1224/2021</u>

ದಿನಾಂಕಃ15.12.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಿ.ಡಬ್ಲ್ಯೂಃ 2 ಸಿ.ಡಬ್ಲ್ಯೂಃ 2

| | |
|---|---|
| ಸಾಕ್ಷಿಯ ಹೆಸರು | ಃ ಪವನ್ |
| ತಂದೆಯ ಹೆಸರು | ಃ ರಾಮನಾಯ್ಕ |
| ವಯಸ್ಸು | ಃ 32 ವರ್ಷ |
| ಉದ್ಯೋಗ | ಃ ವ್ಯವಸಾಯ |
| ವಾಸ | ಃ ಹೊಸಹಳ್ಳಿ ತಾಂಡ್ಯ. |

<u>**ಮುಖ್ಯ ವಿಚಾರಣೆಃ**</u> ಮಾನ್ಯ ಸ ಸ ಅ ಅವರಿಂದಃ-

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಯಾವುದೇ ಛಾಯಾಚಿತ್ರವನ್ನು ತೆಗೆದಿರುವುದಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಿದ್ದು, ಸದರಿ ದಾಖಲೆಯು ಪಂಚನಾಮೆ ಆಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು.

ಮು ಮಾ 1 ಮತ್ತು 2 ನ್ನು ಸಾಕ್ಷಿಗೆ ತೋರಿಸಲಾಗಿ ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)

<u>**ಪಾಟೀ ಸವಾಲುಃ**</u> ಮಾನ್ಯ ಸ ಸ ಅ ರವರಿಂದ ಃ-

ದಿಃ 18.07.2019 ರಂದು ಬೆಳಗ್ಗೆ 07.45 ರಿಂದ 08.30 ಗಂಟೆ ಸಮಯದಲ್ಲಿ ಘಟನಾ ಸ್ಥಳದಲ್ಲಿ ಪೊಲೀಸರು ಮಹಜರ್ ಕ್ರಮವನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಪೊಲೀಸರು ನನ್ನ ಸಮಕ್ಷಮ 90 ಮಿಲಿ ಸಾಮರ್ಥ್ಯದ 48 Captain Martin Special Whiskey ಯ ಮದ್ಯದ ಪೌಚ್‌ಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ

ಎಂದರೆ ಸರಿಯಲ್ಲ. ನಿಪಿ2 ರಲ್ಲಿ ಬರೆದಿರುವ ವಿಚಾರಗಳು ಪೊಲೀಸರು ಓದಿ ಹೇಳಿದ ಮೇಲೆ ನಾನು ಸಹಿ ಹಾಕಿರುತ್ತೇನೆ ಎಂದರೆ ಸರಿಯಲ್ಲ. ನಿಪಿ2 ರಲ್ಲಿ ಇರುವ ವಿಚಾರಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ** ಆರೋಪಿತರ ಪರ ವಕೀಲರಿಂದಃ- ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ :** ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಶಿವಕುಮಾರ್ ಆರ್.)
ಸಿವಿಲ್ ನ್ಯಾಯಾಧೀಶರು ಮತ್ತು
ಹೆ.ಪ್ರ.ದ.ನ್ಯಾ.ದಂಡಾಧಿಕಾರಿ, ತರೀಕೆರೆ.